ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 16-03-2021 ಪ್ರಶ್ನೆ ಸಂಖ್ಯೆ : 1130 (1200)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದಚುನಾಯಿತರಾದವರು) :

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ಪಡಿತರ ಆಹಾರ ವಿತರಣೆ ಮಾಡುವ ಬಗ್ಗೆ

(ಅ) ಬೀದರ್ ಜಿಲ್ಲೆಯಲ್ಲಿ ಸಾರ್ವಜನಿಕ ಪಡಿತರ ಆಹಾರವನ್ನು ವಿತರಿಸಲು ಬಯೋಮೆಟ್ರಿಕ್ ಯಂತ್ರಗಳನ್ನು ಅಳವಡಿಸಿರುವುದರಿಂದ ವಯೋವೃದ್ಧರ ಹಾಗೂ ಹಿರಿಯ ನಾಗರಿಕ ಹೆಬ್ಬೆಟ್ಟಿನ ಗುರುತನ್ನು ಬಯೊಮೆಟ್ರಿಕ್ ಯಂತ್ರ ಗುರುತಿಸಲು ಸಾಧ್ಯವಾಗದೇ ಇರುವ ಪ್ರಯುಕ್ತ ಪಡಿತರ ಆಹಾರ ವಿತರಿಸಲಾಗುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ವಯೋವೃದ್ಧರು ಹಾಗೂ ಹಿರಿಯ ನಾಗರಿಕರಿಗೆ ಬಯೊಮೆಟ್ರಿಕ್ ಯಂತ್ರದ ಬದಲಾಗಿ ಬೇರೆ ಪರ್ಯಾಯವಾಗಿ ಯಾವ ಮಾರ್ಗಗಳನ್ನು ಅನುಸರಿಸಿ ಪಡಿತರ ಆಹಾರ ವಿತರಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)